MVC No.174/2024
PW-1 ರಾಧಮ್ಮ
Date: 18.12.2025

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು 2 ನೇ ಎದುರುದಾರರ ಪರ ಶ್ರೀ ಕೆ ಎಂ ಬಿ ವಕೀಲರಿಂದಃ**

5 ನೇ ಅರ್ಜಿದಾರರು ನನ್ನ ಅತ್ತೆ. 5 ನೇ ಅರ್ಜಿದಾರರು ಅವರು ಇತರೆ ಮಕ್ಕಳೊಂದಿಗೆ ವಾಸವಾಗಿದ್ದಾರೆ ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ಅವರು ನಮ್ಮೊಂದಿಗೆ ವಾಸವಾಗಿದ್ದಾರೆ ಎಂದು ನುಡಿದಿರುತ್ತಾರೆ. 5 ನೇ ಅರ್ಜಿದಾರರು ನನ್ನೊಂದಿಗೆ ವಾಸವಾಗಿದ್ದಾರೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಗಂಡ 5 ನೇ ತರಗತಿ ವರೆಗೆ ವಿದ್ಯಾಭ್ಯಾಸ ಮಾಡಿದ್ದಾರೆ. ನನ್ನ ಗಂಡನಿಗೆ ಸೇರಿದ ಆಧಾರ ಕಾರ್ಡು ಮತ್ತು ಪಡಿತರ ಚೀಟಿ ಇರುತ್ತದೆ. ಅದನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲು ನನಗೆ ಯಾವುದೇ ತೊಂದರೆ ಇಲ್ಲ. ನನ್ನ ಗಂಡ ಮರಣ ಹೊಂದುವ ಕಾಲಕ್ಕೆ ಅವರ ಹೆಸರು 45 ಆಗಿತ್ತು ಎಂದರೆ ಸರಿ. ನನ್ನ ಗಂಡನ ಹೆಸರಿನಲ್ಲಿ ಯಾವುದೇ ಜಮೀನು ಇರುವುದಿಲ್ಲ ಎಂದರೆ ಸರಿ. ನನ್ನ ಗಂಡ ಬೇರೆಯವರ ಜಮೀನಿಗೆ ಕೂಲಿ ಕೆಲಸಕ್ಕೆ ಹೋಗುತ್ತಿದ್ದರು ಎಂದರೆ ಸರಿ. ನನ್ನ ಗಂಡ ವ್ಯವಸಾಯದಿಂದ ಮತ್ತು ಕೂಲಿ ಕೆಲಸದಿಂದ ತಲಾ 20 ಸಾವಿರ ರೂಪಾಯಿ ಆದಾಯವನ್ನು ಹೊಂದಿದ್ದರು ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಗಂಡನ ಸಾವಿನಿಂದ ನನಗೆ ಯಾವುದೇ ಆರ್ಥಿಕ ತೊಂದರೆ ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯಲು ನಾನು ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು). ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ